**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹುಣಸೂರು**

**ಸಿಸಿ ನಂ.744/2023**

**ಫಿರ್ಯಾದುದಾರರುಃ** ಸಚೇಂದ್ರ, ಬಿನ್ ರಾಮಸ್ವಾಮಿ.ಟಿ.ಎಂ.,
45 ವರ್ಷ, ವಾಸಃ ತಟ್ಟೇಕೆರೆ ಗ್ರಾಮ,
ಹನಗೋಡು ಹೋಬಳಿ, ಹುಣಸೂರು ತಾಲ್ಲೂಕು,
ಮೈಸೂರು ಜಿಲ್ಲೆ.

**– ವಿರುದ್ಧ –**

**ಆರೋಪಿಃ** ಕರಿಯಪ್ಪ.ಕೆ.ಬಿ., ಬಿನ್ ಬಾಲಕೃಷ್ಣ.ಕೆ.ಬಿ.,
39ವರ್ಷ, ವಾಸಃ ಡೋರ್ ನಂ.9578,
2ನೇ ಹಂತ, ಬಸ್ ಡಿಪ್ಪೋ ಹತ್ತಿರ,
ವಿಜಯನಗರ 4ನೇ ಹಂತ, ಮೈಸೂರು – 570032
ಮತ್ತು ಡೋರ್ ನಂ.339, ವಿಜಯನಗರ 4ನೇ ಹಂತ,
ಆರ್.ಎಂ.ಪಿ.ಲೇಔಟ್, ಮೈಸೂರು.

**ದಂಡ ಪ್ರಕ್ರಿಯಾ ಸಂಹಿತೆಯ ಕಲಂ 313 ರ ಅಡಿಯಲ್ಲಿ ಆರೋಪಿಯ ಹೇಳಿಕೆ**

| | |
|---|---|
| ಪ್ರಶ್ನೆ 1: | ಫಿರ್ಯಾದುದಾರರಾದ ಸಚೇಂದ್ರ ರವರು ನಿಮ್ಮ ವಿರುದ್ಧ ಕೊಟ್ಟಿರುವ ಹೇಳಿಕೆಗಳನ್ನು ಕೇಳಿದ್ದೀರಾ? |
| ಉತ್ತರ: | ತಿಳಿಯಿತು |
| ಪ್ರಶ್ನೆ 2: | ಪಿ.ಡಬ್ಲ್ಯೂ1 ಸಚೇಂದ್ರ ರವರು ತಮ್ಮ ಸಾಕ್ಷ್ಯದಲ್ಲಿ, ನೀವು ಮತ್ತು ಅವರು ಹಲವಾರು ವರ್ಷಗಳಿಂದ ಪರಿಚಯಸ್ಥರಾಗಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |

| | |
|---|---|
| ಪ್ರಶ್ನೆ 3: | ಇದೇ ಸಾಕ್ಷಿಯು ಮುಂದುವರಿದು ತಮ್ಮ ಸಾಕ್ಷ್ಯದಲ್ಲಿ, ಸದರಿ ಪರಿಚಯದ ಆಧಾರದ ಮೇಲೆ ನೀವು ಫಿರ್ಯಾದುದಾರರಿಂದ ನಿಮ್ಮ ಕಾನೂನುಬದ್ದ ಅವಶ್ಯಕತೆಗಾಗಿ ಅಂದರೆ ನಿಮ್ಮ ಟಿಂಬರ್ ವ್ಯಾಪಾರದ ಅಭಿವೃದ್ಧಿಗಾಗಿ ಡಿಸೆಂಬರ್ 2022ರಲ್ಲಿ ರೂ.10,00,000/- ಗಳನ್ನು ಹತ್ತು ತಿಂಗಳ ಒಳಗೆ ಮರುಪಾವತಿಸುವುದಾಗಿ ಹೇಳಿ ಸಾಲವಾಗಿ ಪಡೆದುಕೊಂಡಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು. ನಾನು ಟಿಂಬರ್ ವ್ಯಾಪಾರ ಮಾಡುತ್ತಿರಲಿಲ್ಲ. |
| ಪ್ರಶ್ನೆ:4 | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಸದರಿ ಸಾಲದ ತೀರುವಳಿಗಾಗಿ 22.09.2023ರ ದಿನಾಂಕ ನಮೂದಿಸಿ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಎಸ್.ಜೆ.ರಸ್ತೆ ಹುಣಸೂರು ಶಾಖೆಯ ಚೆಕ್ ಸಂಃ 645774 ಅನ್ನು ರೂ.10,00,000/-ಗಳನ್ನು ಫಿರ್ಯಾದುದಾರರಿಗೆ ನೀಡಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ |
| ಉತ್ತರ: | ಸುಳ್ಳು |
| ಪ್ರಶ್ನೆ 5: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಸದರಿ ಚೆಕ್ ಅನ್ನು ಅವರು ತಮ್ಮ ಬ್ಯಾಂಕ್ ಆದ ಕೆನರಾ ಬ್ಯಾಂಕ್, ಹುಣಸೂರು ಶಾಖೆಯ ಮೂಲಕ ನಗದೀಕರಣಕ್ಕಾಗಿ ಹಾಜರುಪಡಿಸಿದಾಗ "ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣ ಇಲ್ಲ" ಎಂಬ ಕಾರಣಕ್ಕೆ ಸದರಿ ಚೆಕ್ ದಿನಾಂಕಃ 25.09.2023 ರಂದು ಬ್ಯಾಂಕಿನ ಹಿಂಬರಹದೊಂದಿಗೆ ವಾಪಾಸಾಗಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |

| | |
|---|---|
| ಪ್ರಶ್ನೆ 6: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಈ ಬಗ್ಗೆ ದಿನಾಂಕ 03.10.2023 ರಂದು ಅವರು ನಿಮಗೆ ತಮ್ಮ ವಕೀಲರ ಮೂಲಕ ನೊಂದಾಯಿತ ಅಂಚೆಯ ಮೂಲಕ ನೋಟೀಸನ್ನು ನೀಡಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ನೋಟೀಸು ಬಂದಿದೆ |
| ಪ್ರಶ್ನೆ 7: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಸದರಿ ನೋಟೀಸ್ ದಿನಾಂಕಃ 19.10.2023 ನಿಮಗೆ ಜಾರಿಯಾಗಿದ್ದರೂ ಸಹ ನೀವು ಉದ್ದೇಶಪೂರ್ವಕವಾಗಿ ಫಿರ್ಯಾದುದಾರರಿಗೆ ನೀಡಬೇಕಾದ ಚೆಕ್ಕಿನ ಹಣವನ್ನು ಉದ್ದೇಶಪೂರ್ವಕವಾಗಿ ಮರುಪಾವತಿಸಿಲ್ಲ ಹಾಗು ನೋಟೀಸಿಗೆ ಉತ್ತರವನ್ನು ನೀಡಿರುವುದಿಲ್ಲ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ನೋಟೀಸು ಬಂದಿದೆ |
| ಪ್ರಶ್ನೆ 8: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಆದರೂ ಸಹ ನೀವು ಈವರೆಗೂ ಸಾಲದ ಹಣವನ್ನು ಮರುಪಾವತಿಸದೆ ಇರುವುದರಿಂದ ನೆಗೋಶಿಯೇಬಲ್ ಇನ್ಸ್ಟುಮೆಂಟ್ಸ್ ಕಾಯಿದೆಯ ಕಲಂ 138ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 9: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ ನೀವು ಅವರಿಗೆ ನೀಡಿದ ಚೆಕ್, ಬ್ಯಾಂಕಿನವರು ನೀಡಿದ ಹಿಂಬರಹ, ವಕೀಲರ ಮೂಲಕ ನೀಡಿದ ನೋಟೀಸಿನ ಕಚೇರಿ ಪ್ರತಿ, ಅಂಚೆ ರಶೀದಿ, ಅಂಚೆ ಸ್ವೀಕೃತಿ ಪತ್ರ ಮತ್ತು ದೂರನ್ನು ನಿಪಿ-1 ರಿಂದ ನಿಪಿ-6 ಎಂದು ಗುರುತಿಸಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |

| | |
|---|---|
| ಪ್ರಶ್ನೆ 10: | ನಿಮಗೆ ಈ ಕೇಸಿನ ಬಗ್ಗೆ ಮತ್ತೆ ಏನಾದರೂ ಹೇಳುವುದು ಇದೆಯೇ? |
| ಉತ್ತರ: | ಇಲ್ಲ |
| ಪ್ರಶ್ನೆ 11: | ನಿಮ್ಮ ಪರವಾಗಿ ಸಾಕ್ಷಿ ವಿಚಾರಣೆ ಇದೆಯೇ? |
| ಉತ್ತರ: | ಇಲ್ಲ |

ಈ ಮೇಲ್ಕಂಡ ಹೇಳಿಕೆಯನ್ನು ನಾನೇ ಸ್ವತಃ ಆರೋಪಿಗೆ ಓದಿ ಹೇಳಿ, ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ಬರೆದುಕೊಂಡಿದ್ದು, ಮೇಲೆ ಹೇಳಿರುವುದು ಸತ್ಯ ಮತ್ತು ಸರಿಯಾಗಿದೆಯೆಂದು ದೃಢೀಕರಿಸಿರುತ್ತೇನೆ.

ದಿನಾಂಕಃ 03.09.2025.

Sd/-

(ಅನಿತ)

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾದಂ., ಹುಣಸೂರು.**

ಆರೋಪಿಯ ಸಹಿಃ